# All India Radio: Bangalore
# National Bulletin In Kannada
# 16.08.2026  7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.08.2026  7.35 am**

**<>><><*><><<>**

ಮುಖ್ಯಾಂಶಗಳು

೧. ದೃಢ ಸಂಕಲ್ಪ, ಸಮರ್ಪಣಾ ಭಾವದಿಂದ ರಾಷ್ಟ್ರದ ಸಾಮರ್ಥ್ಯ ಮತ್ತು ಶ್ರಮದ ವ್ಯಾಪ್ತಿ ವಿಸ್ತಾರ- ಪ್ರಧಾನಿ ನರೇಂದ್ರ ಮೋದಿ

೨. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಮತ್ತು ನಾಳೆ ತಮಿಳುನಾಡು ಪ್ರವಾಸ; ಶೈಕ್ಷಣಿಕ, ಸಾಹಿತ್ಯಿಕ ಕಾರ್ಯಕ್ರಮಗಳಲ್ಲಿ ಭಾಗಿ

೩. ರಾಜಸ್ಥಾನದಲ್ಲಿಂದು ಆಳ್ವಾರ್ ಸರಸ್ ಡೈರಿ ಸಂಕೀರ್ಣಕ್ಕೆ ಶಂಕುಸ್ಥಾಪನೆ ನೆರವೇರಿಸಲಿರುವ ಕೇಂದ್ರ ಸಚಿವ ಅಮಿತ್ ಶಾ

೪. 'ಸೂರ್ಯಪಥ್ ತಿರಂಗಾ ಜಾಗತಿಕ ರಿಲೇ' ಯಶಸ್ವಿ ಮುಕ್ತಾಯ; ೫೪ ದೇಶಗಳಲ್ಲಿ ರಾರಾಜಿಸಿದ ತ್ರಿವರ್ಣ ಧ್ವಜ

೫. ಎಫ್ಐಎಚ್ ಹಾಕಿ ವಿಶ್ವಕಪ್; ಡಿ ಗುಂಪಿನ ಪಂದ್ಯದಲ್ಲಿ ವೇಲ್ಸ್ ವಿರುದ್ಧ ಭಾರತಕ್ಕೆ ೩-೧ ಗೋಲುಗಳ ಜಯ

**<>><><*><><<>**

ದೇಶ ನಿನ್ನೆ ತನ್ನ ೮೦ನೇ ಸ್ವಾತಂತ್ರ್ಯ ದಿನೋತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಿತು. ಈ ಐತಿಹಾಸಿಕ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ದೆಹಲಿಯ ಕೆಂಪುಕೋಟೆಯಿಂದ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ದೇಶವನ್ನು ಉದ್ದೇಶಿಸಿ ಪ್ರಮುಖ ಘೋಷಣೆಗಳನ್ನು ಮಾಡಿದರು. ದೇಶವಾಸಿಗಳನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿಯವರು, ಕಳೆದ ಹನ್ನೆರಡು ವರ್ಷಗಳಲ್ಲಿ ದೇಶದ ಕೋಟ್ಯಂತರ ನಾಗರಿಕರು ತಮ್ಮ ದೃಢ ಸಂಕಲ್ಪ ಮತ್ತು ಸಮರ್ಪಣಾ ಭಾವದಿಂದ ಭಾರತವನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಸಾಧ್ಯವಿರುವ ಎಲ್ಲಾ ಪ್ರಯತ್ನಗಳನ್ನು ಮಾಡಿದ್ದಾರೆ ಎಂದರು. ದೊಡ್ಡ ಕನಸುಗಳು ಮತ್ತು ದೃಢ ಸಂಕಲ್ಪಗಳು ರಾಷ್ಟ್ರದ ಸಾಮರ್ಥ್ಯ ಹಾಗೂ ಶ್ರಮದ ವ್ಯಾಪ್ತಿಯನ್ನು ಹೆಚ್ಚಿಸುತ್ತವೆ ಎಂದು ಅವರು ಪ್ರತಿಪಾದಿಸಿದರು. 'ವಿಕಸಿತ ಭಾರತ'ದ ಕನಸನ್ನು ಸಾಕಾರಗೊಳಿಸಲು ಯುವಜನರು ಮತ್ತು ಮಹಿಳೆಯರ ಸಬಲೀಕರಣ ಅತ್ಯಗತ್ಯ ಎಂದ ಪ್ರಧಾನಿ, ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಅಭ್ಯರ್ಥಿಗಳಿಗಾಗಿ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಆನ್‌ಲೈನ್ ತರಬೇತಿ ನೀಡಲಾಗುವುದು ಎಂದು ಘೋಷಿಸಿದರು. ಇದರಜೊತೆಗೆ ಮುಂಬರುವ ಒಂದು ವರ್ಷದಲ್ಲಿ ಒಟ್ಟು ಒಂದು ಕೋಟಿ ಯುವಕ-ಯುವತಿಯರಿಗೆ ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ತರಬೇತಿ ನೀಡಲು ಸರ್ಕಾರ ನಿರ್ಧರಿಸಿದೆ ಎಂದು ಅವರು ಪ್ರಕಟಿಸಿದರು.

<>><><*><><<>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಂಸತ್ತು ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ಜಾರಿಗೊಳಿಸುವ ವಿಚಾರವನ್ನು ರಾಜಕೀಯ ಸಂಘರ್ಷವನ್ನಾಗಿ ಮಾಡದೆ, ಎಲ್ಲ ಪಕ್ಷಗಳು ಬೆಂಬಲಿಸುವಂತೆ ಮನವಿ ಮಾಡಿದ್ದಾರೆ. ಕೆಂಪುಕೋಟೆಯ ಆವರಣದಿಂದ ದೇಶವನ್ನುದ್ದೇಶಿಸಿ ೮೦ನೇ ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ ಮಾಡಿದ ಭಾಷಣದಲ್ಲಿ ಪ್ರಧಾನಮಂತ್ರಿ ಮೋದಿ ಅವರು, ಮಹಿಳೆಯರನ್ನು ಗೌರವಿಸುವ ನಿಟ್ಟಿನಲ್ಲಿ ಎಲ್ಲರೂ ಮುಂದೆ ಬಂದು, ವಿಧಾನಸಭೆಗಳು ಮತ್ತು ಲೋಕಸಭೆಯಲ್ಲಿ ದೇಶದ ಮಹಿಳೆಯರಿಗೆ ಶೇಕಡ ೩೩ರಷ್ಟು ಪ್ರಾತಿನಿಧ್ಯ ಶೀಘ್ರದಲ್ಲೇ ದೊರೆಯುವಂತೆ ನೋಡಿಕೊಳ್ಳಬೇಕು ಎಂದು ಕರೆ ನೀಡಿದರು. ಭಾರತದ ನೀತಿಗಳನ್ನು ರೂಪಿಸುವಲ್ಲಿ ಮಹಿಳೆಯರಿಗೆ ತಮ್ಮ ಕೊಡುಗೆ ನೀಡಲು ಅವಕಾಶ ಕಲ್ಪಿಸಬೇಕು ಎಂದು ಅವರು ಹೇಳಿದರು.

<>><><*><><<>

ಕೇಂದ್ರ ಸಹಕಾರ ಸಚಿವ ಅಮಿತ್ ಶಾ ಅವರು ಇಂದು ರಾಜಸ್ಥಾನದ ಅಲ್ವಾರ್‌ನ ಸರಸ್ ಡೇರಿ ಸಂಕೀರ್ಣದಲ್ಲಿ ನೂತನ ಡೈರಿ ಘಟಕಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ವಿವಿಧ ಹಾಲು ಒಕ್ಕೂಟಗಳ ಡೈರಿ ಸಂಸ್ಕರಣಾ ಘಟಕಗಳು ಹಾಗೂ ಜಾನುವಾರುಗಳ ಮೇವಿನ ಘಟಕಗಳನ್ನು ಅವರು ವರ್ಚುವಲ್ ಮೂಲಕ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ರಾಜಸ್ಥಾನದ ೧೭ ಜಿಲ್ಲೆಗಳಲ್ಲಿ ಒಟ್ಟು ೬ ಸಾವಿರದ ೨೬೨ ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ವರ್ಚುವಲ್ ಮೂಲಕ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಲಾಗುವುದು. ಉದ್ಯೋಗ ಉತ್ಸವದ ಅಂಗವಾಗಿ ಹೊಸದಾಗಿ ನೇಮಕಗೊಂಡ ೧೦ ಸಾವಿರದ ೫೦೦ಕ್ಕೂ ಅಧಿಕ ಸಿಬ್ಬಂದಿಗೆ ನೇಮಕಾತಿ ಪತ್ರಗಳನ್ನು ವಿತರಿಸಲಾಗುವುದು ಎಂದು ಸಹಕಾರ ಸಚಿವಾಲಯ ತಿಳಿಸಿದೆ. ಈ ಸಂದರ್ಭದಲ್ಲಿ ಹೊಸ ಕೇಂದ್ರ ಸಹಕಾರಿ ಬ್ಯಾಂಕ್‌ಗಳ ರಚನೆಯನ್ನೂ ಸಚಿವರು ಘೋಷಿಸಲಿದ್ದಾರೆ. ವಿವಿಧ ಕಲ್ಯಾಣ ಯೋಜನೆಗಳ ಫಲಾನುಭವಿಗಳಿಗೆ ನೇರ ನಗದು ವರ್ಗಾವಣೆ-ಡಿಬಿಟಿ ಮೂಲಕ ಆರ್ಥಿಕ ನೆರವನ್ನು ವರ್ಗಾಯಿಸಲಿದ್ದಾರೆ. 'ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ' ಹಾಗೂ 'ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ'ಯ ಫಲಾನುಭವಿಗಳೂ ಇದರಲ್ಲಿ ಸೇರಿದ್ದಾರೆ.

<>><><*><><<>

ವಿಶ್ವದಲ್ಲೇ ಮೊದಲ ಬಾರಿಗೆ ಆಯೋಜಿಸಲಾಗಿದ್ದ 'ಸೂರ್ಯಪಥ ತಿರಂಗಾ ಜಾಗತಿಕ ರಿಲೇ' ನಿನ್ನೆ ಮುಕ್ತಾಯಗೊಂಡಿದ್ದು, ಪೂರ್ವದಲ್ಲಿ ಫಿಜಿಯಿಂದ ಪಶ್ಚಿಮದಲ್ಲಿರುವ ಅಮೆರಿಕದವರೆಗೆ ೫೪ ದೇಶಗಳು ಹಾಗೂ ವಿವಿಧ ಕಾಲಮಾನಗಳನ್ನು ದಾಟಿ ತನ್ನ ಪಯಣ ಪೂರ್ಣಗೊಳಿಸಿದೆ. 'ಸೂರ್ಯಪಥ ತಿರಂಗಾ' ಉಪಕ್ರಮವನ್ನು 'ಹರ್ ಘರ್ ತಿರಂಗಾ' ಅಭಿಯಾನದ ಅಂಗವಾಗಿ ಆಚರಿಸಲಾಯಿತು. ಫಿಜಿಯಲ್ಲಿರುವ ಭಾರತೀಯ ಹೈಕಮಿಷನ್‌ನಿಂದ ಆರಂಭಗೊಂಡ ರಿಲೇ, ಒಂದು ಸೂರ್ಯೋದಯದಿಂದ ಮತ್ತೊಂದು ಸೂರ್ಯೋದಯದವರೆಗೆ ತಿರಂಗಾದ ಸ್ಫೂರ್ತಿಯನ್ನು ಹೊತ್ತು ಸಾಗಿತು. ಈ ಮೂಲಕ ವಿಶ್ವದಾದ್ಯಂತ ಇರುವ ಭಾರತೀಯ ಸಮುದಾಯ ಹಾಗೂ ಭಾರತದ ಸ್ನೇಹಿತರನ್ನು ಒಗ್ಗೂಡಿಸಿತು ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಸ್ಯಾನ್‌ಫ್ರಾನ್ಸಿಸ್ಕೋದಲ್ಲಿರುವ ಭಾರತೀಯ ಕಾನ್ಸುಲೇಟ್ ಜನರಲ್ ಕಚೇರಿಯಲ್ಲಿ ಧ್ವಜಾರೋಹಣದೊಂದಿಗೆ ರಿಲೇ ಸಮಾಪ್ತಿಯಾಯಿತು. 'ವಂದೇ ಮಾತರಂ' ಗೀತೆಯ ೧೫೦ನೇ ವರ್ಷಾಚರಣೆಯನ್ನೂ ರಿಲೇ ಗುರುತಿಸಿದ್ದು, ಭಾರತದ ರಾಷ್ಟ್ರೀಯ ಸ್ಫೂರ್ತಿ ಮತ್ತು ಹೆಮ್ಮೆಯ ಸಂಕೇತವಾಗಿ ಅದರ ಶಾಶ್ವತ ಪರಂಪರೆಯನ್ನು ಸ್ಮರಿಸಲಾಯಿತು. ರಿಲೇಗೆ ವಿದೇಶಗಳಲ್ಲಿರುವ ಭಾರತೀಯ ಸಮುದಾಯದ ಸದಸ್ಯರಿಂದ ಅಪಾರ

ಪಾಲ್ಗೊಳ್ಳುವಿಕೆ ಮತ್ತು ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಭಾರತದ ಧ್ವಜದೊಂದಿಗೆ ಅವರಿಗಿರುವ ಆಳವಾದ ಭಾವನಾತ್ಮಕ ನಂಟನ್ನು ಇದು ಪ್ರತಿಬಿಂಬಿಸಿದೆ.

<>><><*><><<>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಮತ್ತು ನಾಳೆ ತಮಿಳುನಾಡಿನಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಚೆನ್ನೈ, ಚೆಂಗಲ್ಪಟ್ಟು, ತಿರುವಾರೂರ್ ಮತ್ತು ತಂಜಾವೂರಿನಲ್ಲಿ ನಡೆಯಲಿರುವ ಶೈಕ್ಷಣಿಕ ಹಾಗೂ ಸಾಹಿತ್ಯಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಇಂದು ಉಪರಾಷ್ಟ್ರಪತಿಯವರು ಚೆಂಗಲ್ಪಟ್ಟುವಿನಲ್ಲಿ ನಡೆಯುವ 'ಎಸ್ಆರ್ಎಮ್ ವಿಜ್ಞಾನ ಮತ್ತು ತಂತ್ರಜ್ಞಾನ ಸಂಸ್ಥೆ'ಯ ೨೨ನೇ ಘಟಿಕೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ನಂತರ ನಾಗಾಲ್ಯಾಂಡ್, ಮಣಿಪುರ ಹಾಗೂ ಪಶ್ಚಿಮ ಬಂಗಾಳದ ಮಾಜಿ ರಾಜ್ಯಪಾಲರ ಮೊದಲ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಮತ್ತು ಹಿಂದೂ ಮುನ್ನಾನಿ ಸಂಸ್ಥಾಪಕರಾದ ದಿವಂಗತ ಕೆ.ರಾಮಗೋಪಾಲನ್ ಅವರ ಚಿಂತನೆಗಳನ್ನೊಳಗೊಂಡ 'ಇಕೋಸ್ ಆಫ್ ಎ ನ್ಯಾಷನಲಿಸ್ಟ್ ಮೈಂಡ್' ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಉಪಸ್ಥಿತರಿರಲಿದ್ದಾರೆ. ನಾಳೆ ತಿರುವಾರೂರ್‌ನಲ್ಲಿ ಜರುಗಲಿರುವ 'ತಮಿಳುನಾಡು ಕೇಂದ್ರೀಯ ವಿಶ್ವವಿದ್ಯಾಲಯ'ದ ೧೧ನೇ ಘಟಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ.

<>><><*><><<>

ದೂರಸಂಪರ್ಕ ಇಲಾಖೆ ಆಯೋಜಿಸಿರುವ ಪುಣೆಯ ಬ್ರಿಕ್ಸ್ ಮಾಹಿತಿ ಮತ್ತು ಸಂವಹನ ತಂತ್ರಜ್ಞಾನಗಳ - ಐಟಿಸಿ ಟ್ರ್ಯಾಕ್ ಇಂದಿನಿಂದ ೨೧ ರವರೆಗೆ ನಡೆಯಲಿದೆ. ಸುಸ್ಥಿರ ಭವಿಷ್ಯಕ್ಕಾಗಿ ನಾವೀನ್ಯತೆ, ಸಹಕಾರ ಮತ್ತು ರೂಪಾಂತರ ಎಂಬ ವಿಷಯಾಧಾರಿತ ಈ ಕಾರ್ಯಕ್ರಮವು ೭ನೇ ಬ್ರಿಕ್ಸ್ ಐಟಿಸಿ ಕಾರ್ಯಕಾರಿ ಗುಂಪು ಸಭೆಯೊಂದಿಗೆ ಪ್ರಾರಂಭವಾಗಲಿದೆ. ಸಾರ್ವತ್ರಿಕ, ಅರ್ಥಪೂರ್ಣ, ಕೈಗೆಟುಕುವ, ಸುಸ್ಥಿರ ಮತ್ತು ಸ್ಥಿತಿಸ್ಥಾಪಕ ಸಂಪರ್ಕಕ್ಕಾಗಿ ಐಸಿಟಿ ಪರಿಸರ ವ್ಯವಸ್ಥೆ ಅಭಿವೃದ್ಧಿಪಡಿಸುವ ಬಗ್ಗೆ ಪ್ರತಿನಿಧಿಗಳು ಚರ್ಚೆ ನಡೆಸುವ ನಿರೀಕ್ಷೆ ಇದೆ.

<>><><*><><<>

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ-ಎನ್‌ಟಿಎ ಇಂದು ಯುಜಿಸಿ-ನೆಟ್ ಜೂನ್ ೨೦೨೬, ಸಿಎಸ್ಐಆರ್-ನೆಟ್, ಐಸಿಎಆರ್- ಅಖಿಲ ಭಾರತ ಪ್ರವೇಶ ಪರೀಕ್ಷೆ ಹಾಗೂ ಪಿಎಚ್‌ಡಿ ಕಾರ್ಯಕ್ರಮಗಳ ಪ್ರವೇಶ ಮತ್ತು ಅಖಿಲ ಭಾರತ ಸ್ಪರ್ಧಾತ್ಮಕ ಪರೀಕ್ಷೆಗಳ ತಾತ್ಕಾಲಿಕ ಉತ್ತರ ಪತ್ರಿಕೆಗಳನ್ನು ಬಿಡುಗಡೆ ಮಾಡಲಿದೆ. ಸಾಮಾಜಿಕ ಜಾಲತಾಣದದಲ್ಲಿ ಎನ್‌ಟಿಎ, ತಾತ್ಕಾಲಿಕ ಉತ್ತರ ಪತ್ರಿಕೆಗಳನ್ನು ತನ್ನ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು ಎಂದು ತಿಳಿಸಿದೆ. ಅಭ್ಯರ್ಥಿಗಳು ಎನ್‌ಟಿಎಯ ಅಧಿಕೃತ ಮಾಹಿತಿಯನ್ನು ಮಾತ್ರ ಅವಲಂಬಿಸುವಂತೆ ಸಂಸ್ಥೆ ಸಲಹೆ ನೀಡಿದೆ.

<>><><*><><<>

೮೦ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಿನ್ನೆ ರಾಷ್ಟ್ರಪತಿ ಭವನದಲ್ಲಿ ಸ್ವಾಗತ ಸಮಾರಂಭ ಆಯೋಜಿಸಿದ್ದರು. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಮಂತ್ರಿ ನರೇಂದ್ರ ಮೋದಿ, ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್, ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ಲೋಕಸಭಾ ಸಭಾಧ್ಯಕ್ಷ ಓಂ ಬಿರ್ಲಾ, ಕೇಂದ್ರ ಸಚಿವರು, ರಾಜತಾಂತ್ರಿಕರು, ವಿವಿಧ ಕ್ಷೇತ್ರಗಳ ಗಣ್ಯರು ಹಾಗೂ ವಿವಿಧ ಸರ್ಕಾರಿ

ಯೋಜನೆಗಳ ಫಲಾನುಭವಿಗಳು ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ಈ ವರ್ಷದ ಸ್ವಾಗತ ಸಮಾರಂಭದಲ್ಲಿ ಛತ್ತೀಸ್‌ಗಢ, ಗೋವಾ, ಮಧ್ಯಪ್ರದೇಶ ಮತ್ತು ಮಹಾರಾಷ್ಟ್ರ ರಾಜ್ಯಗಳ ಶ್ರೀಮಂತ ಹಾಗೂ ವೈವಿಧ್ಯಮಯ ಕಲೆ ಮತ್ತು ಸಂಸ್ಕೃತಿ, ಕಾಲಾತೀತ ಪರಂಪರೆಗಳು ಹಾಗೂ ಪಾಕಪದ್ಧತಿಯನ್ನು ಬಿಂಬಿಸಲಾಯಿತು.

<>><><*><><<>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ನಿನ್ನೆ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ನವದೆಹಲಿಯ ಉಪರಾಷ್ಟ್ರಪತಿ ಭವನದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಈ ಕುರಿತು ಸಾಮಾಜಿಕ ಜಾಲತಾಣ ಪೋಸ್ಟ್‌ನಲ್ಲಿ ಉಪರಾಷ್ಟ್ರಪತಿ, ವಿದ್ಯಾರ್ಥಿಗಳು ದೇಶದ ಭವಿಷ್ಯವಾಗಿದ್ದು, ವಿಕಸಿತ ಭಾರತ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಲಿದ್ದಾರೆ ಎಂದು ಹೇಳಿದರು. ನಿರಂತರ ಕಲಿಕೆಗೆ ಆದ್ಯತೆ ನೀಡುವಂತೆ, ಕುತೂಹಲವನ್ನು ಬೆಳೆಸಿಕೊಳ್ಳುವಂತೆ, ದೊಡ್ಡ ಕನಸುಗಳನ್ನು ಕಾಣುವಂತೆ ಹಾಗೂ ಹೊಸ ಅವಕಾಶಗಳನ್ನು ಸ್ವೀಕರಿಸುವಂತೆ ಅವರು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಶೈಕ್ಷಣಿಕ ಚಟುವಟಿಕೆಗಳ ಜೊತೆಗೆ ಕ್ರೀಡೆ ಮತ್ತು ಪಠ್ಯೇತರ ಚಟುವಟಿಕೆಗಳಿಗೂ ಸಮಾನ ಮಹತ್ವ ನೀಡಬೇಕು ಎಂದು ಅವರು ತಿಳಿಸಿದರು.

<>><><*><><<>

ನೆದರ್ಲ್ಯಾಂಡ್ಸ್‌ನಲ್ಲಿ ನಡೆದ ಎಫ್‌ಐಎಚ್ ಹಾಕಿ ವಿಶ್ವಕಪ್‌ನ ಗ್ರೂಪ್ ಡಿ ಪಂದ್ಯದಲ್ಲಿ ಭಾರತ ನಿನ್ನೆ ವೇಲ್ಸ್ ತಂಡವನ್ನು ೩-೧ ಗೋಲುಗಳಿಂದ ಮಣಿಸಿದೆ. ಭಾರತದ ಪರವಾಗಿ, ನಾಯಕ ಹರ್ಮನ್‌ಪ್ರೀತ್ ಸಿಂಗ್ ಎರಡು ಗೋಲುಗಳನ್ನು ಗಳಿಸಿದರೆ, ಸಂಜಯ್ ರಾಣಾ ಒಂದು ಗೋಲು ಗಳಿಸಿದರು. ವೇಲ್ಸ್ ಪರ ಸ್ಯಾಮ್ ವೆಲ್ಷ್ ಏಕೈಕ ಗೋಲು ಗಳಿಸಿದರು.

<>><><*><><<>

ಯುವ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವೀಯ ಅವರು ನಿನ್ನೆ ನವದೆಹಲಿಯಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ಮೈ ಭಾರತ್-ಎನ್‌ಎಸ್‌ಎಸ್ ಸ್ವಯಂಸೇವಕರೊಂದಿಗೆ ಸಂವಾದ ನಡೆಸಿದರು. ಸ್ವಯಂಸೇವಕರನ್ನುದ್ದೇಶಿಸಿ ಮಾತನಾಡಿದ ಸಚಿವರು, ಸಾಮಾಜಿಕ ಸೇವೆಗೆ ಅವರು ನೀಡುತ್ತಿರುವ ಕೊಡುಗೆಯನ್ನು ಶ್ಲಾಘಿಸಿದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**